# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 2356 (2726) |
| ಸದಸ್ಯರ ಹೆಸರು | ಶ್ರೀ ಸಲೀಂ ಅಹಮದ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | 28.03.2022. |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಮೂಲಸೌಕರ್ಯಗಳು ಇಲ್ಲದೆ ಸಿಬ್ಬಂದಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| (ಆ) | ಮೂಲಸೌಕರ್ಯಗಳ ಕೊರತೆ ಮತ್ತು ಬೋಧನಾ ಸಿಬ್ಬಂದಿ ಕೊರತೆಯು ವಿದ್ಯಾರ್ಥಿಗಳ ಉದ್ಯೋಗಾವಕಾಶಗಳ ಮೇಲೆ ದುಷ್ಪರಿಣಾಮ ಬೀರುವುದಿಲ್ಲವೇ; | ರಾಜ್ಯದಲ್ಲಿ ಪ್ರಸ್ತುತ 14 ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು ಅಸ್ತಿತ್ವದಲ್ಲಿದೆ. ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿ ಪಡಿಸುವ ಸಲುವಾಗಿ 2020-21ನೇ ಆರ್ಥಿಕ ಸಾಲಿನಲ್ಲಿ ಎಐಸಿಟಿಇ ಮಾರ್ಗಸೂಚಿಯಾನುಸಾರ ರೂ.3750.00 ಲಕ್ಷಗಳ ವಿವಿಧ ಅಭಿವೃದ್ಧಿ ಕಾಮಗಾರಿಗಳು ಮಂಜೂರಾಗಿದ್ದು, ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br><br>ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಪ್ರಸ್ತುತ 14 ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು ಕಾರ್ಯನಿರ್ವಹಿಸುತ್ತಿದ್ದು, ಸದರಿ ಸಂಸ್ಥೆಗಳ ಬೋಧಕ/ಬೋಧಕೇತರ ಸಿಬ್ಬಂದಿಗಳ ವಿವರ ಕೆಳಕಂಡಂತಿರುತ್ತದೆ:- |

| ಬೋಧಕ ಹುದ್ದೆಗಳ ವಿವರ | | | | |
|---|---|---|---|---|
| ಕ್ರ. ಸಂ | ಹುದ್ದೆಯ ವರ್ಗ | ಮಂಜೂರಾದ ಹುದ್ದೆಗಳ ಸಂಖ್ಯೆ | ಭರ್ತಿಯಾದ ಹುದ್ದೆಗಳ ಸಂಖ್ಯೆ | ಖಾಲಿ ಇರುವ ಹುದ್ದೆಗಳ ಸಂಖ್ಯೆ |
| 1 | ಎ | 229 | 109 | 120 |
| 2 | ಬಿ | 417 | 235 | 182 |
| ಒಟ್ಟು | | 646 | 344 | 302 |

| ಬೋಧಕೇತರ ಹುದ್ದೆಗಳ ವಿವರ | | | | |
|---|---|---|---|---|
| ಕ್ರ. ಸಂ | ಹುದ್ದೆಯ ವರ್ಗ | ಮಂಜೂರಾದ ಹುದ್ದೆಗಳ ಸಂಖ್ಯೆ | ಭರ್ತಿಯಾದ ಹುದ್ದೆಗಳ ಸಂಖ್ಯೆ | ಖಾಲಿ ಇರುವ ಹುದ್ದೆಗಳ ಸಂಖ್ಯೆ |
| 1 | ಎ | 10 | 0 | 10 |

| | | | | |
|---|---|---|---|---|
| 2 | ಬಿ | 21 | 14 | 7 |
| 3 | ಸಿ | 680 | 114 | 566 |
| 4 | ಡಿ | 439 | 10 | 429 |
| ಒಟ್ಟು | | 1150 | 138 | 944 |

ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಖಾಲಿ ಇರುವ ಬೋಧಕ ಹುದ್ದೆಗೆದುರಾಗಿ ಪ್ರಸ್ತುತ 285 ಅರೆಕಾಲಿಕ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಂಡು ಪಾಠ ಪ್ರವಚನ ನಡೆಸಲಾಗುತ್ತಿದೆ ಮತ್ತು ಸಂಸ್ಥೆಗಳ ಆಡಳಿತಾತ್ಮಕ ಹಿತದೃಷ್ಟಿಯಿಂದ ಖಾಲಿ ಇರುವ ಗ್ರೂಪ್-ಡಿ ಹುದ್ದೆಗಳ ಎದುರಾಗಿ 193 ಹೊರಗುತ್ತಿಗೆ ನೌಕರರನ್ನು ನೇಮಿಸಿಕೊಂಡು ಕೆಲಸ ಕಾರ್ಯಗಳನ್ನು ನಿರ್ವಹಿಸಲಾಗುತ್ತಿದೆ.

| | | |
|---|---|---|
| (ಇ) | ಮೂಲಸೌಕರ್ಯಗಳ ಕೊರತೆಯಿರುವ ಈ ಸರ್ಕಾರಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡಿರುವ ಬಡ ವಿದ್ಯಾರ್ಥಿಗಳು ಖಾಸಗಿ ಕಾಲೇಜಿನಲ್ಲಿ ವ್ಯಾಸಂಗ ಮಾಡಿರುವ ವಿದ್ಯಾರ್ಥಿಗಳೊಂದಿಗೆ ಸ್ಪರ್ಧೆ ನಡೆಸಲು ಸಾಧ್ಯವಿದೆಯೇ; | ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳನ್ನು ಪ್ರತಿಷ್ಠಿತ ಖಾಸಗಿ ಕಾಲೇಜುಗಳಂತೆ ಬಲಪಡಿಸುವ ಉದ್ದೇಶದಿಂದ 2022-23 ನೇ ಆಯವ್ಯಯದಲ್ಲಿ ಅತ್ಯುನ್ನತ ಗುಣಮಟ್ಟದ ತಾಂತ್ರಿಕ ಬೋಧನೆ-ಕಲಿಕೆಗಳಿಗೆ ಹಾಗೂ ಸಂಶೋಧನೆಯನ್ನು ಉತ್ತೇಜಿಸಲು ರಾಜ್ಯದ ಏಳು ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳನ್ನು Karnataka Institute of Technology ಗಳನ್ನಾಗಿ ಉನ್ನತೀಕರಿಸಿ, ಪ್ರತಿಷ್ಠಿತ ವಿದೇಶಿ ವಿಶ್ವವಿದ್ಯಾಲಯಗಳೊಂದಿಗೆ ಒಪ್ಪಂದ ಮಾಡಿಕೊಳ್ಳಲಾಗುವುದು" ಎಂದು ಘೋಷಿಸಲಾಗಿದ್ದು, ಅದರಂತೆ ಕ್ರಮವಹಿಸಲಾಗುವುದು. |
| (ಈ) | ಇಂಜಿನಿಯರಿಂಗ್ ಕಾಲೇಜುಗಳ ನಿರ್ವಹಣೆಗೆ ಅಗತ್ಯ ಅನುದಾನ ಬಿಡುಗಡೆ ಮಾಡಲು ಸರ್ಕಾರಕ್ಕಿರುವ ಸಮಸ್ಯೆಗಳೇನು; | ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಆಡಳಿತಾತ್ಮಕ ನಿರ್ವಹಣೆ ಅಂದರೆ ವಿದ್ಯುಚ್ಛಕ್ತಿ ವೆಚ್ಚ, ದೂರವಾಣಿ ವೆಚ್ಚ ಹಾಗೂ ಕಛೇರಿ ವೆಚ್ಚಕ್ಕಾಗಿ ಅಗತ್ಯ ಅನುದಾನವನ್ನು ಒದಗಿಸಿದ್ದು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ನಿರ್ವಹಣೆಯನ್ನು ಸಮರ್ಪಕವಾಗಿ ನಿರ್ವಹಿಸಲಾಗಿದೆ. |
| (ಉ) | ಇಂಜಿನಿಯರಿಂಗ್ ಕಾಲೇಜುಗಳಿಗೆ ಐ.ಐ.ಟಿ ಮಾದರಿಯಲ್ಲಿ ಅನುದಾನ ನೀಡುವ ಮತ್ತು ಪ್ರತ್ಯೇಕ ಆಯುಕ್ತಾಲಯ ಸ್ಥಾಪಿಸುವ ಪ್ರಸ್ತಾಪ ಸರ್ಕಾರದ ಮುಂದೆ ಇದೆಯೇ? | ಇಲ್ಲ.<br>ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳನ್ನು ಪ್ರತಿಷ್ಠಿತ ಖಾಸಗಿ ಕಾಲೇಜುಗಳಂತೆ ಬಲಪಡಿಸುವ ಉದ್ದೇಶದಿಂದ 2022-23 ನೇ ಆಯವ್ಯಯದಲ್ಲಿ ಅತ್ಯುನ್ನತ ಗುಣಮಟ್ಟದ ತಾಂತ್ರಿಕ ಬೋಧನೆ-ಕಲಿಕೆಗಳಿಗೆ ಹಾಗೂ ಸಂಶೋಧನೆಯನ್ನು ಉತ್ತೇಜಿಸಲು ರಾಜ್ಯದ ಏಳು ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳನ್ನು "Karnataka Institute of Technology"ಗಳನ್ನಾಗಿ ಉನ್ನತೀಕರಿಸಿ, ಪ್ರತಿಷ್ಠಿತ ವಿದೇಶಿ ವಿಶ್ವವಿದ್ಯಾಲಯಗಳೊಂದಿಗೆ ಒಪ್ಪಂದ ಮಾಡಿಕೊಳ್ಳಲಾಗುವುದು" ಎಂಬ ಘೋಷಣೆಯನ್ನು ಮಾಡಲಾಗಿದ್ದು, ಅದರಂತೆ ಕ್ರಮವಹಿಸಲಾಗುವುದು. |

ಸಂಖ್ಯೆ: ಇಡಿ 65 ಹೆಚ್‌ಪಿಟಿ 2022)

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು
ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು
ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು.